**Akashvani : Bangalore**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**06.04.2024 / 18.40 hrs**

<u>ಮುಖ್ಯಾಂಶಗಳು</u>

೧. ರಾಜ್ಯದಲ್ಲಿ ಮೊದಲ ಹಂತದ ಚುನಾವಣೆ ; ೧೪ ಕ್ಷೇತ್ರಗಳಲ್ಲಿ ೩೮೪ ನಾಮಪತ್ರ ಕ್ರಮಬದ್ಧ ; ನಾಡಿದ್ದು ಹಿಂಪಡೆಯಲು ಕೊನೆಯ ದಿನ

೨. ರಾಜ್ಯದಲ್ಲಿ ಬಿಜೆಪಿ-ಕಾಂಗ್ರೆಸ್ ಸೇರಿ ವಿವಿಧ ರಾಜಕೀಯ ಪಕ್ಷಗಳಿಂದ ಬಿರುಸಿನ ಮತ ಪ್ರಚಾರ

೩. ಬೆಂಗಳೂರು ಕುಡಿಯುವ ನೀರಿನ ನಿರ್ವಹಣೆ ಬಗ್ಗೆ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ತೀವ್ರ ಅಸಮಾಧಾನ

೪. ಸಾರ್ವತ್ರಿಕ ಚುನಾವಣೆ ಮತದಾನ ಪ್ರಮಾಣ ಹೆಚ್ಚಳಕ್ಕೆ ಹಲವೆಡೆ ಜಾಗೃತಿ ಕಾರ್ಯಕ್ರಮ

<><*<><>*><>

ರಾಜ್ಯದಲ್ಲಿ ಇದೇ ೨೬ರಂದು ನಡೆಯಲಿರುವ ಮೊದಲ ಹಂತದ ಲೋಕಸಭಾ ಚುನಾವಣೆಯ ನಾಮಪತ್ರಗಳ ಪರಿಶೀಲನೆ ಕಾರ್ಯ ಪೂರ್ಣಗೊಂಡಿದೆ. ಈ ಹಂತದಲ್ಲಿ ಚುನಾವಣೆ ನಡೆಯಲಿರುವ ಒಟ್ಟು ೧೪ ಕ್ಷೇತ್ರಗಳಿಂದ ೩೫೮ ಅಭ್ಯರ್ಥಿಗಳಿಂದ ೪೯೨ ನಾಮಪತ್ರಗಳು ಸಲ್ಲಿಕೆಯಾಗಿವೆ. ಈ ಪೈಕಿ ೩೮೪ ನಾಮಪತ್ರಗಳು ಕ್ರಮಬದ್ಧವಾಗಿದ್ದು, ೬೦ ನಾಮಪತ್ರಗಳು ತಿರಸ್ಕೃತಗೊಂಡಿವೆ ಎಂದು ಮುಖ್ಯ ಚುನಾವಣಾಧಿಕಾರಿಗಳು ತಿಳಿಸಿದ್ದಾರೆ. ನಾಡಿದ್ದು ಸೋಮವಾರ ನಾಮಪತ್ರ ವಾಪಸ್ ಪಡೆಯಲು ಕೊನೆಯ ದಿನವಾಗಿದ್ದು, ಆ ಬಳಿಕ ಅಂತಿಮವಾಗಿ ಚುನಾವಣಾ ಕಣದಲ್ಲಿ ಉಳಿಯುವ ಅಭ್ಯರ್ಥಿಗಳ ಸ್ಪಷ್ಟ ಚಿತ್ರಣ ಸಿಗಲಿದೆ. ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಚುನಾವಣೆಗೆ ಸಲ್ಲಿಕೆಯಾಗಿದ್ದ ೨೮ ಅಭ್ಯರ್ಥಿಗಳ ನಾಮಪತ್ರಗಳ ಪೈಕಿ ನಾಲ್ವರ ನಾಮಪತ್ರಗಳು ತಿರಸ್ಕೃತಗೊಂಡಿದ್ದು, ೨೪ ಅಭ್ಯರ್ಥಿಗಳ ನಾಮಪತ್ರಗಳು ಕ್ರಮಬದ್ಧವಾಗಿವೆ ಎಂದು ಜಿಲ್ಲಾ ಚುನಾವಣಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ. ಮೇ ೭ ರಂದು ನಡೆಯಲಿರುವ ರಾಜ್ಯದ ಎರಡನೇ ಹಂತದ ೧೪ ಲೋಕಸಭಾ ಕ್ಷೇತ್ರಗಳಿಗೆ ನಾಡಿದ್ದು, ಸೋಮವಾರ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಆರಂಭವಾಗಲಿದೆ. ಬಳ್ಳಾರಿ ಸೇರಿದಂತೆ ರಾಜ್ಯದ ೧೪ ಕ್ಷೇತ್ರಗಳಲ್ಲಿ ನಾಮಪತ್ರ ಸಲ್ಲಿಕೆಗೆ ಚುನಾವಣಾ ಆಯೋಗ ಅಗತ್ಯಕ್ರಮ ಕೈಗೊಂಡಿದೆ.

<><*<><>*><>

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ನಾನಾ ಪಕ್ಷಗಳ ಪ್ರಮುಖ ನಾಯಕರು ಬಿರುಸಿನ ಪ್ರಚಾರದಲ್ಲಿ ತೊಡಗಿದ್ದಾರೆ. ಬೆಂಗಳೂರು, ಬೆಂಗಳೂರು ಗ್ರಾಮಾಂತರ ಕ್ಷೇತ್ರಗಳಲ್ಲಿ ಬಿಜೆಪಿ ನಾಯಕರು ತಮ್ಮ ಪಕ್ಷದ ಅಭ್ಯರ್ಥಿಗಳ ಪರ ಮತಯಾಚನೆ ಮಾಡಿದರು. ಮಂಡ್ಯ, ಹಾಸನ ಮತ್ತು ಕೋಲಾರ ಲೋಕಸಭಾ ಕ್ಷೇತ್ರಗಳಲ್ಲಿ ಜೆಡಿಎಸ್-ಬಿಜೆಪಿ ಮೈತ್ರಿ ಅಭ್ಯರ್ಥಿಗಳು ಅಲ್ಲಲ್ಲಿ ಸಭೆ, ಸಮಾವೇಶಗಳ ಮೂಲಕ ಚುನಾವಣಾ ಪ್ರಚಾರ ನಡೆಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕೋಲಾರ ಜಿಲ್ಲೆಯ ಮುಳಬಾಗಲು ತಾಲೂಕಿನ ಕುರುಡುಮಲೆ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿ, ಚುನಾವಣಾ ಪ್ರಚಾರ ಆರಂಭಿಸಿದರು.

<><*<><>*><>

ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ರಾಜ್ಯದಲ್ಲಿ ಅತಿಹೆಚ್ಚು ಸ್ಥಾನಗಳಲ್ಲಿ ಜಯಗಳಿಸಲಿದ್ದು, ಕೋಲಾರ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಗೆಲುವು ನಿಶ್ಚಿತ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಕೋಲಾರ ಜಿಲ್ಲೆ ಮುಳಬಾಗಿಲು ತಾಲೂಕಿನ ಕುರುಡುಮಲೆ ಗಣಪತಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸುವ ಮೂಲಕ ಕಾಂಗ್ರೆಸ್ ಚುನಾವಣಾ ಪ್ರಚಾರಕ್ಕೆ ಚಾಲನೆ ನೀಡಿ; ಈ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ರಾಜ್ಯದ ಜನರು ಬೆಂಬಲಿಸುವ ವಿಶ್ವಾಸವಿದೆ ಎಂದು ತಿಳಿಸಿದರು. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾತನಾಡಿ, ಚುನಾವಣೆ ಪ್ರಚಾರದ ವೇಳೆ ಕಾಂಗ್ರೆಸ್ ಸರ್ಕಾರ ನೀಡಿರುವ ಪಂಚಖಾತ್ರಿ ಯೋಜನೆಗಳು ಎಲ್ಲರಿಗೂ ತಲುಪುತ್ತಿವೆ ಎಂದು ಹೇಳಿದರು.

<><*<><>*><>

ಬೆಂಗಳೂರಿನ ನೀರಿನ ಕೊರತೆ ನಿರ್ವಹಣೆ ಬಗ್ಗೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಅವರು ಬೆಂಗಳೂರಿನಲ್ಲಿಂದು ಮಾಧ್ಯಮದೊಂದಿಗೆ ಮಾತನಾಡಿ, ಜಾಗತಿಕ ನಗರವಾದ ಬೆಂಗಳೂರು, ಕುಡಿಯುವ ನೀರಿನ ಬಿಕ್ಕಟ್ಟು ಎದುರಿಸುತ್ತಿರುವುದು ಚಿಂತೆಯ ವಿಷಯವಾಗಿದೆ. ನಗರದಲ್ಲಿ ಕಾಲರಾ ರೋಗ ಹರಡುವ ಭೀತಿಯಿದೆ. ಕುಡಿಯುವ ನೀರಿನ ಬಿಕ್ಕಟ್ಟು ಇರುವಾಗ, ಕಲುಷಿತ ನೀರು ಬಳಕೆಯಾಗುವ ಸಾಧ್ಯತೆಗಳು ಹೆಚ್ಚು ಎಂದರು. ರಾಜ್ಯದಲ್ಲಿ ನೀರು ಹಾಗೂ ನೀರಾವರಿ ಕಾಮಗಾರಿ ಸೇರಿದಂತೆ ಒಟ್ಟು ೨೦ ಸಾವಿರ ಕೋಟಿ ರೂಪಾಯಿಗೂ ಹೆಚ್ಚು ಮೌಲ್ಯದ ಕಾಮಗಾರಿಗಳನ್ನು ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಥಗಿತಗೊಳಿಸಿದ್ದಾರೆ. ಪ್ರತಿ ಮನೆಗೆ ಕುಡಿಯುವ ನೀರು ಒದಗಿಸುವ 'ಜಲಜೀವನ್ ಮಿಷನ್' ಕಾಮಗಾರಿ ಕೂಡ ಸ್ಥಗಿತಗೊಂಡಿದೆ ಎಂದು ಸಚಿವೆ ನಿರ್ಮಲಾ ಸೀತರಾಮನ್ ಆಪಾದಿಸಿದರು.

<><*<><>*><>

ರಾಜ್ಯದಲ್ಲಿ ಬರ ಘೋಷಣೆಯನ್ನೇ ತಡ ಮಾಡಿರುವ ರಾಜ್ಯದ ಕಾಂಗ್ರೆಸ್ ಸರ್ಕಾರ ಬರ ನಿರ್ವಹಣೆಯಲ್ಲಿ ಸಂಪೂರ್ಣ ವಿಫಲವಾಗಿದೆ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಅವರು, ಬರವನ್ನು ಘೋಷಣೆ ಮಾಡಲು ಸರ್ಕಾರ ಮೂರ್‍ನಾಲ್ಕು ತಿಂಗಳು ತೆಗೆದುಕೊಂಡಿದ್ದು, ಜನರ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ. ಕುಡಿಯುವ ನೀರಿನ ಸಮಸ್ಯೆ ಉದ್ಭವಿಸಿದ್ದರು ಮುಂಜಾಗ್ರತಾ ಕ್ರಮ ಕೈಗೊಳ್ಳುವಲ್ಲಿ ಸರ್ಕಾರ ಎಡವಿದೆ ಎಂದು ದೂರಿದರು. ಬರ ನಿರ್ವಹಣೆಗೆ ಕೇಂದ್ರ ಅನುದಾನದ ಬಗ್ಗೆ ಕಾಂಗ್ರೆಸ್ ನಾಯಕರು ವಿನಾ ಕಾರಣ ಆರೋಪ ಮಾಡುತ್ತಿದ್ದಾರೆ. ಅವರ ಧೋರಣೆ ಸರಿಯಲ್ಲ ಎಂದು ಅಶೋಕ ಹೇಳಿದರು.

<><*<><>*><>

ಹಾವೇರಿ ಜಿಲ್ಲೆಯ ಎಂಟು ತಾಲೂಕುಗಳು ಬರಪೀಡಿತ ಎಂದು ಘೋಷಣೆಯಾಗಿದ್ದು, ವಲಸೆ ಹೋಗುವ, ಕೂಲಿ ಕಾರ್ಮಿಕರಿಗೆ ತಮ್ಮ ಸ್ವಂತ ಊರಿನಲ್ಲಿ ಕೆಲಸ ನೀಡಲು 'ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ'ಯಡಿ ಜಿಲ್ಲೆಯಲ್ಲಿ ಸುಮಾರು ೪೧ ಸಾವಿರ ೭೨೯ ಕೂಲಿ ಕಾರ್ಮಿಕರಿಗೆ ಪ್ರತಿ ದಿನ ಕೆಲಸ ನೀಡಲಾಗುತ್ತಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅಕ್ಷಯ ಶ್ರೀಧರ್ ಹೇಳಿದ್ದಾರೆ. ಬ್ಯಾಡಗಿ ತಾಲೂಕಿನ ಕುಮ್ಮೂರು, ಸೂಡಂಬಿ, ಮತ್ತೂರು, ನೆಲ್ಲಿಕೊಪ್ಪ, ಚಿಕ್ಕಳ್ಳಿ ಹಾಗೂ ಹಿರೇಹಳ್ಳಿ ಗ್ರಾಮಗಳಿಗೆ ಇಂದು ಮನ್ರೇಗಾ ಯೋಜನೆ ಕಾಮಗಾರಿಗಳ ಸ್ಥಳಕ್ಕೆ ಭೇಟಿ ನೀಡಿ, ಕೂಲಿಕಾರರೊಂದಿಗೆ ಮಾತನಾಡಿದ ಅವರು, ಜಿಲ್ಲೆಯಲ್ಲಿ ಯಾವ ಕೂಲಿಕಾರರು ಕೆಲಸವಿಲ್ಲವೆಂದು ವಲಸೆ ಹೋಗದಂತೆ ನಿರಂತರ ಉದ್ಯೋಗ ಒದಗಿಸಲಾಗುವುದು ಎಂದು ಹೇಳಿದರು. ಕೂಲಿಕಾರರಿಗೆ ಪ್ರತಿ ದಿನದ ಕೂಲಿ ೩೧೬ರಿಂದ ೩೪೯ ರೂಪಾಯಿ ನಿಗದಿಪಡಿಸಿದ್ದು, ಬರಗಾಲದ ಸಮಯದಲ್ಲಿ ಇನ್ನಷ್ಟು ಬಲ ಬಂದಂತಾಗಿದೆ. ಬಿಸಿಲು ಹೆಚ್ಚು ಇರುವುದರಿಂದ ಕೂಲಿಕಾರರಿಗೆ ಕೆಲಸದ ಸ್ಥಳದಲ್ಲಿ ನೆರಳು, ನೀರು ಮತ್ತು ಪ್ರಥಮ ಚಿಕಿತ್ಸೆ ಪಟ್ಟಿಗೆ ವ್ಯವಸ್ಥೆಯನ್ನು ಕಲ್ಪಿಸಲು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಇದೇ ವೇಳೆ ಅವರು ಸೂಚನೆ ನೀಡಿದರು.

<><*<><>*><>

ಕೋಲಾರ ಜಿಲ್ಲೆಯಲ್ಲಿ ಎದುರಾಗಿರುವ ಬರ ಪರಿಸ್ಥಿತಿ ಹಿನ್ನೆಲೆಯಲ್ಲಿ ಜನ ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ಯಾವುದೇ ರೀತಿಯ ಕೊರತೆಯಾಗದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಅಕ್ರಂ ಪಾಷ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಕೋಲಾರದಲ್ಲಿಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನೀರು ಪೋಲಾಗದಂತೆ ಲಭ್ಯವಿರುವ ನೀರಿನ ಸಮರ್ಪಕ ನಿರ್ವಹಣೆ ಸೇರಿದಂತೆ ಅವಶ್ಯಕತೆಯಿರುವ ಮತ್ತು ತೀವ್ರ ನೀರಿನ ಸಮಸ್ಯೆಯನ್ನು ಎದುರಿಸಬಹುದಾದ ಗ್ರಾಮಗಳಲ್ಲಿ ಖಾಸಗಿ ಬೋರ್‌ವೆಲ್ ಗುರುತಿಸಿ, ಮಾಲೀಕರೊಂದಿಗೆ ನಿಯಮಾವಳಿ ಅನ್ವಯ ಒಡಂಬಡಿಕೆ ಮಾಡಿಕೊಳ್ಳುವಂತೆ ಅವರು ಸೂಚಿಸಿದರು.

<><*<><>*><>

ಚಿತ್ರದುರ್ಗ ಜಿಲ್ಲೆಯ ಎಲ್ಲಾ ಆರು ತಾಲೂಕುಗಳನ್ನು ತೀವ್ರ ಬರ ಪೀಡಿತ ಪ್ರದೇಶವೆಂದು ಸರ್ಕಾರ ಘೋಷಿಸಿದೆ. ಪ್ರಸ್ತುತ ಜಿಲ್ಲೆಯಲ್ಲಿ ಬರದ ತೀವ್ರತೆ ಅಧಿಕವಾಗಿದ್ದು, ಜಾನುವಾರುಗಳಿಗೆ ಮೇವಿನ ಕೊರತೆ ಉಂಟಾಗಬಹುದು. ಈ ಪರಿಸ್ಥಿತಿ ನಿಭಾಯಿಸಲು ಜಿಲ್ಲಾ ವ್ಯಾಪ್ತಿಯಲ್ಲಿ ಉತ್ಪಾದನೆಯಾಗುವ ಎಲ್ಲಾ ವಿಧದ ಹಸಿರು, ಒಣ ಹಾಗೂ ಸಂಸ್ಕರಿಸಿದ ಮೇವನ್ನು ಜಿಲ್ಲಾ ವ್ಯಾಪ್ತಿಯನ್ನು ಹೊರತುಪಡಿಸಿ ಹೊರ

ಜಿಲ್ಲೆಗಳಿಗೆ ಸಾಗಾಣಿಕೆ ಮಾಡುವುದನ್ನು ನಿಷೇಧಿಸಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಕೂಡಲೇ ಜಾರಿಗೆ ಬರುವಂತೆ ಆದೇಶ ನೀಡಿದ್ದಾರೆ.

<><*<><>*><>

ಲೋಕಸಭಾ ಚುನಾವಣೆಯಲ್ಲಿ ಮತದಾನ ಪ್ರಮಾಣ ಹೆಚ್ಚಳ, ವ್ಯವಸ್ಥಿತ ಮತದಾನ, ಮತದಾನ ಪ್ರಕ್ರಿಯೆಯಲ್ಲಿ ಪ್ರತಿಯೊಬ್ಬ ಮತದಾರರ ಪಾಲ್ಗೊಳ್ಳುವಿಕೆ ಕುರಿತು ಅರಿವು ಮೂಡಿಸಲು ರಾಜ್ಯದೆಲ್ಲೆಡೆ ವಿವಿಧ ರೀತಿಯಲ್ಲಿ ಜಾಗೃತಿ ಕಾರ್ಯಕ್ರಮಗಳು ನಡೆಯುತ್ತಿವೆ.

ಉತ್ತರಕನ್ನಡ ಜಿಲ್ಲೆಯ ಯಲ್ಲಾಪುರದಲ್ಲಿ ಎಲ್ಲ ಗ್ರಾಮ ಪಂಚಾಯತಿಗಳ ಕಸ ವಿಲೇವಾರಿ ಘಟಕದ ಆಟೋ ಟಿಪ್ಪರ್ ಹಾಗೂ ಅಂಗನವಾಡಿ ಕಾರ್ಯಕರ್ತೆಯರ ಜಾಥಾ ನಡೆಯಿತು. ಜಾಥಾಕ್ಕೆ ಚುನಾವಣಾಧಿಕಾರಿ ತನುಜಾ ಸವದತ್ತಿ ಚಾಲನೆ ನೀಡಿ, ಮತದಾನ ನಮ್ಮೆಲ್ಲರ ಪವಿತ್ರ ಹಕ್ಕು. ಯಾವುದೇ ಆಮಿಷಗಳಿಗೆ ಬಲಿಯಾಗದೇ, ಕಡ್ಡಾಯವಾಗಿ ಮತದಾನ ಮಾಡುವ ಮೂಲಕ ಈ ಹಕ್ಕಿನ ಚಲಾವಣೆ ಮಾಡಬೇಕು ಎಂದರು.

ಬಾಗಲಕೋಟೆಯಲ್ಲಿ ಜಿಲ್ಲಾಡಳಿತ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ 'ನಮ್ಮ ನಡೆ ಮತಗಟ್ಟೆ ಕಡೆ' ಎಂಬ ಘೋಷವಾಕ್ಯದೊಂದಿಗೆ ವಿಶೇಷಚೇತನರಿಂದ ಮತದಾನ ಜಾಗೃತಿ ಬೈಕ್‌ರ್ಯಾಲಿ ನಡೆಯಿತು. ಬೈಕ್ ರ್ಯಾಲಿಗೆ ಜಿಲ್ಲಾಧಿಕಾರಿ ಕೆ.ಎಂ. ಜಾನಕಿ ಮತ್ತು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಚಾಲನೆ ನೀಡಿದರು. ಮತದಾನ ಜಾಗೃತಿ ಅಭಿಯಾನದಡಿ ಜಿಲ್ಲೆಯಲ್ಲಿ ವಿಶೇಷಚೇತನರು ಮೇ ೭ ರಂದು ನಡೆಯಲಿರುವ ಲೋಕಸಭಾ ಚುನಾವಣೆಯಲ್ಲಿ ತಪ್ಪದೇ ಮತದಾನ ಮಾಡುವಂತೆ ಮನವಿ ಮಾಡಿದರು.

ಮಂಡ್ಯದಲ್ಲಿ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಮತದಾನದ ಮಹತ್ವ ಹಾಗೂ ನೈತಿಕ ಮತದಾನ ಕುರಿತು ಜಾಗೃತಿ ಮೂಡಿಸುವ ಕಾರ್ಯಕ್ರಮ ನಡೆಯಿತು. ಮಂಡ್ಯ ಜಿಲ್ಲಾ ಸ್ವೀಪ್ ರಾಯಭಾರಿಯಾದ ಚಲನಚಿತ್ರ ನಟ ಹಾಗೂ ಹಿರಿಯ ರಂಗಕರ್ಮಿ ಮಂಡ್ಯ ರಮೇಶ್ ಕಾರ್ಯಕ್ರಮದಲ್ಲಿ ಮತದಾನದ ಬಗ್ಗೆ ಜಾಗೃತಿ ಮೂಡಿಸಿದರು.

ಧ್ವನಿ : ಮಂಡ್ಯ ರಮೇಶ್

ಬೆಂಗಳೂರು ಸಾರ್ವತ್ರಿಕ ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಇಬ್ಬರು ಪೊಲೀಸ್ ವೀಕ್ಷಕರನ್ನು ನೇಮಕ ಮಾಡಲಾಗಿದೆ. ಬೆಂಗಳೂರು ಕೇಂದ್ರ ಮತ್ತು ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರಕ್ಕೆ ಐಪಿಎಸ್ ಅಧಿಕಾರಿ ಡಾ.ಸಿ.ಎಂ.ತ್ರಿವಿಕ್ರಮ್ ವರ್ಮ ಅವರನ್ನು ಪೊಲೀಸ್ ವೀಕ್ಷಕರನ್ನಾಗಿ ನೇಮಿಸಲಾಗಿದೆ. ಬೆಂಗಳೂರು ಉತ್ತರ ಮತ್ತು ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಐಪಿಎಸ್ ಅಧಿಕಾರಿ ಹೇಮಂತ್ ಕುಟಿಯಾಲ್ ಅವರನ್ನು ನೇಮಕ ಮಾಡಲಾಗಿದೆ. ಪೊಲೀಸ್ ಇಲಾಖೆಗೆ ಸಂಬಂಧಿಸಿದ ದೂರುಗಳನ್ನು ಸಾರ್ವಜನಿಕರು ಪೊಲೀಸ್ ವೀಕ್ಷಕರಿಗೆ ಸಲ್ಲಿಸಬಹುದಾಗಿದೆ ಎಂದು ಪೊಲೀಸ್ ಇಲಾಖೆ ಪ್ರಕಟಣೆ ತಿಳಿಸಿದೆ.

ಹುಬ್ಬಳ್ಳಿ ತಾಲೂಕು ಆಡಳಿತಸೌಧದ ಮುಂಭಾಗದಲ್ಲಿ ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ಹಾಗೂ ತಾಲೂಕು ಸ್ವೀಪ್ ಸಮಿತಿ ವತಿಯಿಂದ ಮತದಾರರಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮದ ಅಂಗವಾಗಿ ಸಹಿ ಸಂಗ್ರಹ ಅಭಿಯಾನವನ್ನು ಹಮ್ಮಿಕೊಳ್ಳಲಾಗಿತ್ತು.

ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಡಾ.ರಾಮಚಂದ್ರ ಹೊಸಮನಿ ಹಾಗೂ ಹುಬ್ಬಳ್ಳಿ ಶಹರ ತಹಶೀಲ್ದಾರ ಕಲಗೌಡ ಪಾಟೀಲ ಸಹಿ ಹಾಕುವ ಮೂಲಕ ಅಭಿಯಾನಕ್ಕೆ ಚಾಲನೆ ನೀಡಿದರು.

ರಾಮನಗರ ಜಿಲ್ಲೆಯ ಚೆನ್ನಪಟ್ಟಣದಲ್ಲಿ ಸ್ವೀಪ್ ಸಮಿತಿ ವತಿಯಿಂದ ನಡೆದ ಮತದಾನ ಜಾಗೃತಿ ಕಾರ್ಯಕ್ರಮಕ್ಕೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ದಿಗ್ವಿಜಯ್ ಬೋಡ್ಕೆ ಚಾಲನೆ ನೀಡಿದರು. ನಂತರ ಅವರು, ಮತದಾನ ಪ್ರತಿ ಭಾರತೀಯ ಪ್ರಜೆಯ ಹಕ್ಕು, ಯಾವುದೇ ಆಸೆ ಆಮಿಷಗಳಿಗೆ ಒಳಗಾಗದೆ ಭವಿಷ್ಯವನ್ನು ದೃಷ್ಟಿಯಲ್ಲಿ ಇಟ್ಟುಕೊಂಡು ತಪ್ಪದೆ ಮತದಾನ ಮಾಡಬೇಕೆಂದು ಮನವಿ ಮಾಡಿದರು.

<><*<><>*><>

ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಸಂಬಂಧಿಸಿದಂತೆ, ಮತದಾನ ಪ್ರಯುಕ್ತ ಮತಗಟ್ಟೆಗಳಲ್ಲಿ ಕಾರ್ಯನಿರ್ವಹಿಸುವ ಎಲ್ಲಾ ಸಿಬ್ಬಂದಿಗೆ ತಾಜಾತನ ಮತ್ತು ಸ್ವಾದಿಷ್ಟಭರಿತ ಆಹಾರ ಸಿದ್ಧಪಡಿಸಿ, ವಿತರಿಸುವಂತೆ ಅಕ್ಷರ ದಾಸೋಹ ವಿಭಾಗದ ಅಧಿಕಾರಿಗಳಿಗೆ ಉತ್ತರಕನ್ನಡ ಜಿಲ್ಲಾ ಚುನಾವಣಾಧಿಕಾರಿ ಗಂಗೂಬಾಯಿ ಮಾನಕರ ಸೂಚನೆ ನೀಡಿದರು. ಕಾರವಾರದಲ್ಲಿಂದು ಅಕ್ಷರ ದಾಸೋಹ ಯೋಜನೆಯ ಸಹಾಯಕ ನಿರ್ದೇಶಕರು ಮತ್ತು ಮಧ್ಯಾಹ್ನದ ಉಪಹಾರ ಯೋಜನೆಯ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮತದಾನದ ಹಿಂದಿನ ದಿನ ಮಸ್ಟರಿಂಗ್ ಕೇಂದ್ರದಲ್ಲಿಯೇ ಎಲ್ಲಾ ಸಿಬ್ಬಂದಿಗೆ ಮಧ್ಯಾಹ್ನದ ಭೋಜನ ವ್ಯವಸ್ಥೆ ಮಾಡಲಾಗುವುದು. ಊಟೋಪಚಾರ ಕುರಿತಂತೆ ಯಾವುದೇ ಸಿಬ್ಬಂದಿಯಿಂದ ದೂರುಗಳು ಬಾರದಂತೆ ಉತ್ತಮ ರೀತಿಯಲ್ಲಿ, ಎಚ್ಚರಿಕೆಯಿಂದ ಮತ್ತು ಜವಾಬ್ದಾರಿಯುತವಾಗಿ ತಮಗೆ ವಹಿಸಲಾದ ಕರ್ತವ್ಯವನ್ನು ನಿರ್ವಹಿಸುವಂತೆ ನಿರ್ದೇಶನ ನೀಡಿದರು.

**<><*<><>*><>**

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಅನುಮಾನಾಸ್ಪದ ಬ್ಯಾಂಕ್ ವಹಿವಾಟು ಮತ್ತು ಡಿಜಿಟಲ್ ಪಾವತಿಗಳ ಮೇಲೆ ನಿಗಾ ವಹಿಸಬೇಕು. ಬೃಹತ್ ಮೊತ್ತದ ವಹಿವಾಟು, ಅನುಮಾನಾಸ್ಪದ ವಹಿವಾಟುಗಳು ಕಂಡುಬಂದಲ್ಲಿ ಕೂಡಲೇ ಮಾಹಿತಿಯನ್ನು ನೀಡಬೇಕು ಎಂದು ಬೆಳಗಾವಿ ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ ಬ್ಯಾಂಕ್ ಅಧಿಕಾರಿಗಳಿಗೆ ತಿಳಿಸಿದರು. ಬೆಳಗಾವಿಯಲ್ಲಿ ಇಂದು ನಡೆದ ಬ್ಯಾಂಕ್ ಅಧಿಕಾರಿಗಳ ಸಭೆಯಲ್ಲಿ ಅವರು, ಲೋಕಸಭಾ ಚುನಾವಣೆಯಲ್ಲಿ ಆಮಿಷಗಳ ಮೂಲಕ ಮತದಾರರ ಮೇಲೆ ಪ್ರಭಾವ ಬೀರುವ ಅಕ್ರಮ ಯತ್ನಗಳನ್ನು ತಡೆಗಟ್ಟಲು, ಚುನಾವಣಾ ಆಯೋಗವು ಅನುಮಾನಾಸ್ಪದ ಬ್ಯಾಂಕ್ ವಹಿವಾಟುಗಳು ಮತ್ತು ಡಿಜಿಟಲ್ ಪಾವತಿಗಳನ್ನು ಕಟ್ಟುನಿಟ್ಟಾಗಿ ಗಮನಿಸುತ್ತಿದೆ. ಜಿಲ್ಲೆಯಲ್ಲಿ ಸದ್ಯಕ್ಕೆ ೫ ಬ್ಯಾಂಕ್‌ಗಳು ಮಾತ್ರ ಅನುಮಾನಾಸ್ಪದ ವಹಿವಾಟುಗಳ ಮಾಹಿತಿ ಲಭ್ಯವಾಗುತ್ತಿದ್ದು, ಉಳಿದ ಬ್ಯಾಂಕ್ ಗಳಿಂದ ಮಾಹಿತಿ ಬರಬೇಕಿದೆ. ಬ್ಯಾಂಕ್ ಅಧಿಕಾರಿಗಳು ಕೂಡಲೇ ಅಂತಹ ವಹಿವಾಟಿನ ಕುರಿತು ಮಾಹಿತಿ ಸಲ್ಲಿಸಬೇಕು ಎಂದು ಸೂಚಿಸಿದರು.

**<><*<><>*><>**

ಲೋಕಸಭಾ ಚುನಾವಣಾ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಚುನಾವಣಾ ಅಕ್ರಮಗಳ ತಡೆಗೆ ತೀವ್ರ ಕಟ್ಟೆಚ್ಚರ ವಹಿಸಲಾಗಿದೆ. ಚುನಾವಣಾ ಆಯೋಗ ಮತ್ತು ಪೊಲೀಸ್ ಜಂಟಿ ಕಾರ್ಯಾಚರಣೆಯಲ್ಲಿ ಹಲವೆಡೆ ಬೆಲೆ ಬಾಳುವ ವಸ್ತುಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ. ವಿಜಯನಗರ ಜಿಲ್ಲೆಯ ಹೊಸಪೇಟೆ ತಾಲೂಕಿನ ಬುಕ್ಕಸಾಗರದ ಬಳಿ ದಾಖಲೆ ಇಲ್ಲದೆ ಸಾಗಾಣೆ ಮಾಡುತ್ತಿದ್ದ ೬ ಲಕ್ಷ ೭೨ ಸಾವಿರ ರೂಪಾಯಿ ಮೌಲ್ಯದ ೧೬ ಸಾವಿರದ ೧೮೦ ಸೀರೆಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಲೋಕಸಭೆ ಚುನಾವಣೆಯ ಹಿನ್ನೆಲೆಯಲ್ಲಿ ವಾಹನ ತಪಾಸಣೆ ಮಾಡುತ್ತಿದ್ದ ವೇಳೆ ಕಮಲಾಪುರ ಪೊಲೀಸ್ ಠಾಣೆ ವ್ಯಾಪ್ತಿಯ ಬುಕ್ಕಸಾಗರ ಚೆಕ್ ಪೋಸ್ಟ್ ನಲ್ಲಿ ಗಂಗಾವತಿ ಕಡೆಯಿಂದ ಹೊಸಪೇಟೆಗೆ ಹೋಗುತ್ತಿದ್ದ ವಾಹನದಲ್ಲಿ ಪತ್ತೆಯಾಗಿದ್ದು ಪ್ರಕರಣ ದಾಖಲಿಸಲಾಗಿದೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಕ್ರಮ ಮದ್ಯ ಸಾಗಾಟ ಪ್ರಕರಣಕ್ಕೆ ಸಂಬಂಧಿಸಿ ವಶಪಡಿಸಿಕೊಂಡ ಸೊತ್ತುಗಳ ಮೌಲ್ಯ ಒಂದು ಕೋಟಿ ರೂಪಾಯಿ ದಾಟಿದೆ. ಈವರೆಗೆ ಜಿಲ್ಲೆಯಲ್ಲಿ ೧ ಕೋಟಿ ೯೫ ಲಕ್ಷ ೬೫ ಸಾವಿರದ ೨೧೨ ರೂಪಾಯಿ ಮೌಲ್ಯದ ೯೦ ಸಾವಿರದ ೪೯೬ ಲೀಟರ್ ಮದ್ಯವನ್ನು ಜಪ್ತಿ ಮಾಡಲಾಗಿದೆ ಹಾಗೂ ೮ ಲಕ್ಷ ೬೯ ಸಾವಿರದ ೯೫೦ ರೂಪಾಯಿ ಮೌಲ್ಯದ ೧೫.೫ ಕೆಜಿ ಮಾದಕ ದ್ರವ್ಯವನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಮುಲ್ಲೈ ಮುಗಿಲನ್ ತಿಳಿಸಿದ್ದಾರೆ.

**<><*<><>*><>**

ಲೋಕಸಭಾ ಚುನಾವಣಾ ಹಿನ್ನೆಲೆಯಲ್ಲಿ ಚುನಾವಣಾ ಕರ್ತವ್ಯಗಳನ್ನು ನಿರ್ಲಕ್ಷಿಸಿ ಕರ್ತವ್ಯ ಲೋಪವೆಸಗಿರುವ ರಾಮನಗರ ಜಿಲ್ಲೆ ಮಾಗಡಿ ತಾಲೂಕಿನ ಕುದೂರಿನ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕ ಕುಮಾರ್ ಅವರನ್ನು ಸೇವೆಯಿಂದ ಅಮಾನತ್ತುಗೊಳಿಸಿ ಜಿಲ್ಲಾಧಿಕಾರಿ ಹಾಗೂ ಬೆಂಗಳೂರು ಗ್ರಾಮಾಂತರದ ಲೋಕಸಭಾ ಕ್ಷೇತ್ರದ ಚುನಾವಣಾಧಿಕಾರಿ ಡಾ. ಅವಿನಾಶ್ ಮೆನನ್ ರಾಜೇಂದ್ರನ್ ಆದೇಶ ಹೊರಡಿಸಿದ್ದಾರೆ.

**<><*<><>*><>**

ತಂಪು ಜಿಲ್ಲೆ ಎಂಬ ಹೆಗ್ಗಳಿಕೆಯ ಕೊಡಗು ಜಿಲ್ಲೆಗೂ ಈ ವರ್ಷ ಬಿಸಿಲಿನ ಶಾಖ ತಟ್ಟಿದೆ. ಭಾರತೀಯ ಹವಾಮಾನ ಇಲಾಖೆಯು ಪ್ರಸ್ತುತ ಹಾಗೂ ಮೇ ಅಂತ್ಯದವರೆಗೆ ಸೂರ್ಯನ ಬಿಸಿಲು ಮತ್ತು ಬಿಸಿಗಾಳಿ ಹೆಚ್ಚಾಗುವ ಬಗ್ಗೆ ಮುನ್ನೆಚ್ಚರಿಕೆಯನ್ನು ನೀಡಿದೆ. ಕೊಡಗು ಜಿಲ್ಲೆಯಲ್ಲಿ ಸೂರ್ಯನ ಶಾಖವು ದಿನದಿಂದ

ದಿನಕ್ಕೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಹೀಟ್‌ವೇವ್ ದಿಂದಾಗಿ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆಗಳಿರುವುದರಿಂದ ಎಲ್ಲಾ ಸಾರ್ವಜನಿಕರಿಗೆ ತಮ್ಮ ಆರೋಗ್ಯ ಕಾಪಾಡಿಕೊಳ್ಳಲು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವು ಮುಂಜಾಗ್ರತಾ ಕ್ರಮವಾಗಿ ಸಲಹೆಗಳನ್ನು ನೀಡಿದೆ. ಬೇಸಿಗೆಯಲ್ಲಿನ ಅತೀ ಹೆಚ್ಚು ತಾಪಮಾನದಿಂದ ಉಂಟಾಗುವ ಅನಾರೋಗ್ಯವನ್ನು ತಡೆಗಟ್ಟಲು ಸಾರ್ವಜನಿಕರು ಮುನ್ನೆಚ್ಚರಿಕೆ ಕ್ರಮಗಳನ್ನು ವಹಿಸಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಕೆ.ಎಂ.ಸತೀಶ್ ಕುಮಾರ್ ತಿಳಿಸಿದ್ದಾರೆ.

**<><*<><>*><>**

ಜೈಪುರದಲ್ಲಿಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿಯ ಪಂದ್ಯದಲ್ಲಿ ರಾಜಸ್ತಾನ್ ರಾಯಲ್ಸ್ ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

**<><*<><>*><>**

ಇನ್ನು ಹವಾವರ್ತಮಾನ;

ರಾಜ್ಯಾದ್ಯಂತ ಒಣಹವೆ ಮುಂದುವರಿದಿದೆ. ರಾಜ್ಯದಲ್ಲಿ ಅತೀ ಗರಿಷ್ಠ ಉಷ್ಣಾಂಶ ೪೩.೩ ಡಿಗ್ರಿ ಸೆಲ್ಸಿಯಸ್ ಕಲಬುರಗಿಯಲ್ಲಿ ದಾಖಲಾಗಿದೆ. ಮುನ್ಸೂಚನೆಯಂತೆ ಮುಂದಿನ ೨೪ ಗಂಟೆಗಳಲ್ಲಿ ಕೊಡಗು, ಚಿಕ್ಕಮಗಳೂರು ಮತ್ತು ಹಾಸನ ಜಿಲ್ಲೆಗಳ ಒಂದೆರಡು ಕಡೆಗಳಲ್ಲಿ ಹಗುರವಾಗಿ ಮಳೆಯಾಗುವ ಸಂಭವ. ಇನ್ನುಳಿದ ಜಿಲ್ಲೆಗಳಲ್ಲಿ ಒಣಹವೆ ಮುಂದುವರೆಯುವ ಸಾಧ್ಯತೆ. ಬೆಂಗಳೂರು ಮತ್ತು ಸುತ್ತಮುತ್ತ ಬೆಳಿಗ್ಗೆ ಭಾಗಶಃ ಮೋಡ ಕವಿದ ವಾತಾವರಣ. ಮಧ್ಯಾಹ್ನ ಅಥವಾ ಸಂಜೆ ವೇಳೆಗೆ ಶುಭ್ರ ಆಕಾಶ ವಾತಾವರಣ. ಗರಿಷ್ಠ ಉಷ್ಣಾಂಶ ೩೮ ಮತ್ತು ಕನಿಷ್ಠ ೨೩ ಡಿಗ್ರಿ ಸೆಲ್ಸಿಯಸ್‌ನಷ್ಟು ತಾಪಮಾನ ನಿರೀಕ್ಷಿತ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**